**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/03/ಇಸಿಎಸ್(2)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ:10-10-2017

**ಸುತ್ತೋಲೆ**

ವಿಷಯ:ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರ ಅಳವಡಿಸಿರುವ ಬಗ್ಗೆ ಮಾಹಿತಿ ನೀಡುವ ಕುರಿತು.
ಉಲ್ಲೇಖ:1. ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/03/ಇಸಿಎಸ್(2)/2017 ದಿ:22-07-2017
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/03/ಇಸಿಎಸ್(2)/2017 ದಿ:27-06-2017

*************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಡಿಪ್ಲೋಮ ಪರೀಕ್ಷೆಗಳು ಶಿಸ್ತುಬದ್ಧವಾಗಿ ಹಾಗೂ ಪಾರದರ್ಶಕತೆಯಿಂದ ಜರುಗಲು ಮತ್ತು ಮಾಲ್ ಪ್ರಾಕ್ಟೀಸ್ ಪ್ರಕರಣಗಳನ್ನು ತಡೆಯಲು ಅನುವಾಗುವಂತೆ ಉಲ್ಲೇಖ (1) ರನ್ವಯ ಎಲ್ಲಾ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳಲ್ಲಿ ದಿನಾಂಕ:30-07-2017 ರೊಳಗೆ ಸಿಸಿ ಕ್ಯಾಮರಗಳನ್ನು ಅಳವಡಿಸಿ ಮಂಡಳಿಗೆ ಮಾಹಿತಿ ನೀಡುವಂತೆ ತಿಳಿಸಲಾಗಿತ್ತು. ಆದರೆ ಇದುವರೆವಿಗೂ ಹೆಚ್ಚಿನ ಸಂಸ್ಥೆಗಳು ಸಿಸಿ ಕ್ಯಾಮರಾ ಅಳವಡಿಸಿರುವ ಬಗ್ಗೆ ಯಾವುದೇ ಮಾಹಿತಿಯನ್ನು ಮಂಡಳಿಗೆ ನೀಡಿರುವುದಿಲ್ಲ.

ಪರೀಕ್ಷಾ ಕೇಂದ್ರಗಳನ್ನು ಹೊಂದಿರುವ ಎಲ್ಲಾ ಪಾಲಿಟೆಕ್ನಿಕ್ ಸಂಸ್ಥೆಗಳು ಪ್ರಸ್ತುತ 2017 ನವೆಂಬರ್/ಡಿಸೆಂಬರ್ ಸೆಮಿಸ್ಟರ್ ಪರೀಕ್ಷಾ ಅವಧಿಯ ವೇಳೆಗೆ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಿರುವುದನ್ನು ಖಾತರಿಪಡಿಸುವುದು ಅವಶ್ಯವಾಗಿರುವ ಹಿನ್ನೆಲೆಯಲ್ಲಿ, ಗೂಗಲ್ ನಮೂನೆ (Google format) https://goo.gl/forms/zEKxr3zq3C1croUr1 ನ Google ಲಿಂಕ್‌ನಲ್ಲಿ ಪರೀಕ್ಷಾ ಕೊಠಡಿಗಳಲ್ಲಿ ಸಿಸಿ ಕ್ಯಾಮರಾ ಅಳವಡಿಸಿರುವ ಕುರಿತಾದ ಮಾಹಿತಿಯನ್ನು ಭರ್ತಿ ಮಾಡಿ ದಿನಾಂಕ:16-10-2017 ರೊಳಗೆ ಕಳುಹಿಸುವಂತೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಗಳ ಪ್ರಿನ್ಸಿಪಾಲರಿಗೆ, ಸೂಕ್ತ ಕ್ರಮಕ್ಕಾಗಿ.

ಪ್ರತಿ:
1. ಉಪ ನಿರ್ದೇಶಕರು/ ಸಹಾಯಕ ನಿರ್ದೇಶಕರು/ಹಿರಿಯ ತಾಂತ್ರಿಕ ಸಹಾಯಕರು/ರಿಜಿಸ್ಟ್ರಾರ್ (ಪರೀಕ್ಷೆ)
2. ಇ- ಆಡಳಿತ ವಿಭಾಗಕ್ಕೆ ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು
3. ಗಣಕ ಕೇಂದ್ರ ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು